ಉ) ಗ್ರಾಮಾಭಿವೃದ್ಧಿ ಇಲಾಖೆಗಳಲ್ಲಿ ಪಂಚಾಯತ್ ನೌಕರರಾಗಿ ಸೇವೆಸಲ್ಲಿಸುತ್ತಿರುವ ಸುಮಾರು 30 ಸಾವಿರಕ್ಕೂ ಅಧಿಕ ನೌಕರರಿಗೆ ನಗರಸಭಾ ನೌಕರರಂತೆ ಸೇವಾ ನಿಯಮಾವಳಿ ರೂಪಿಸಿ ಕನಿಷ್ಠ ವೇತನ, ತುಟ್ಟಿಭತ್ಯೆ ಹಾಗೂ ಪೆನ್ಷನ್ ಪಾವತಿಸುವರೆ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ವಿಳಂಬ ನೀತಿ ಸಮಂಜಸವೇ (ವಿವರ ನೀಡುವುದು)?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. ಶಿರಸ್ತೆದಾರ್ ಹಂತದ ಹೊಸ ಹುದ್ದೆ ರಚಿಸಲಾಗುವುದು.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಉಡುಪಿ ಜಿಲ್ಲೆಯಲ್ಲಿ ಗ್ರೇಡ್–2 ವೃಂದದಲ್ಲಿನ ಒಟ್ಟು 85 ಹುದ್ದೆಗಳ ವೃಂದ ಬಲದಲ್ಲಿ ಶೇಕಡ 40 ರಷ್ಟು ಹುದ್ದೆಗಳನ್ನು ಈಗಾಗಲೇ ಎಸ್.ಎಸ್.ಎಲ್.ಸಿ ಪಾಸಾಗಿ 10 ವರ್ಷ ಸೇವೆ ಸಲ್ಲಿಸಿದ ಗ್ರಾಮ ಪಂಚಾಯತ್ ನೌಕರರಿಂದ ನೇಮಕಾಗಿ ಮಾಡಿಕೊಳ್ಳಲಾಗಿದೆ.

ಈ ಹುದ್ದೆಯ ಕೋಟಾವನ್ನು ಶೇ. 40 ರಿಂದ 50 ಕ್ಕೆ ವೃದ್ಧಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಉ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

2036 (2440) ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ) :–
ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರಗೀತೆಗೆ ಸಮನಾದ ನಾಡಗೀತೆಯನ್ನು ಅಪಮಾನಿಸಿದ್ದ ಬೆಳಗಾಂ ತಾ. ಕ್ಷೇತ್ರ ಶಿಕ್ಷಣಾಧಿಕಾರಿ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ಹಾಗೂ ಕ್ರಮ ಕೈಗೊಳ್ಳದಿದ್ದಲ್ಲಿ ಕಾರಣವೇನು;

ಆ) ಬಿ.ಆರ್. ಸಂಸ್ಥೆಯ ಶಾಲೆಯ ಬಗ್ಗೆ ಅಕ್ಕಪಕ್ಕದ ಶಾಲೆಗಳಿಂದ ದೂರು ಇರುವುದು ನಿಜವೇ;

ಇ) ನಿಜವಾದಲ್ಲಿ, ಕ್ರಮ ಕೈಗೊಳ್ಳದಿರಲು ಕಾರಣವೇನು;

ಈ) ಬಿ.ಆರ್. ಸಂಸ್ಥೆಯ ಶಾಲೆಯ ವಿರುದ್ಧ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾವಿರವರು ಆದೇಶ ನೀಡಿದ್ದರೂ ಸಹ ಅದನ್ನು ಜಾರಿಗೊಳಿಸದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಾಲ್ಲೂಕು ವಲಯ, ಬೆಳಗಾವಿ ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳದಿರಲು ಕಾರಣವೇನು;

ಉ) ಬೆಂಗಳೂರು ಉತ್ತರ ವಲಯ–3 ರಲ್ಲಿ ಮಾತೃಭಾಷಾ ನೀತಿ ಉಲ್ಲಂಘಿಸದ ಶಾಲೆಗಳು ಯಾವುವು;

ಊ) ಮಾತೃಭಾಷಾ ನೀತಿ ಉಲ್ಲಂಘಿಸದ ಶಾಲಾ ಪಟ್ಟಿ ತಯಾರಿಕೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸರ್ಕಾರ ಉನ್ನತ ಅಧಿಕಾರಿಗಳ ತನಿಖೆಗೆ ಆದೇಶಿಸುವುದೇ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬೆಳಗಾವಿ ತಾ. ಕ್ಷೇತ್ರ ಶಿಕ್ಷಣಾಧಿಕಾರಿಗಳು, ನಾಡಗೀತೆಗೆ ಅವಮಾನ ಮಾಡಲಾಗಿಲ್ಲವೆಂದು ತಿಳಿಸಿರುತ್ತಾರೆ. ಅದಕ್ಕೆ ಸಾಕ್ಷಿಯಾಗಿ ಆ ದಿನಾಂಕದಂದು ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ ತಾಲ್ಲೂಕಿನ ಸಮನ್ವಯಾಧಿಕಾರಿಗಳು ಹಾಗೂ ಬೆಳಗಾವಿ ತಾ. ಕರ್ನಾಟಕ ಸುವರ್ಣ ಜಯಂತಿ ಉತ್ಸವ ಸಮಿತಿ ನೋಡಲ್ ಅಧಿಕಾರಿಗಳು ಉದ್ಘಾಟನಾ ಸಮಾರಂಭದಲ್ಲಿ ನಾಡಗೀತೆ ಹಾಡುವಾಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಹಿತ ಎಲ್ಲಾ ಅಧಿಕಾರಿ ವೃಂದದವರು ಎದ್ದು ನಿಂತು ಗೌರವ ಸೂಚಿಸಿದ್ದು, ಪ್ರಯುಕ್ತ ನಾಡಗೀತೆ ಹೇಳುವಾಗ ಕ್ಷೇತ್ರ ಶಿಕ್ಷಣಾಧಿಕಾರಿಗಳು ಬೆಳಗಾವಿ ತಾ. ಇವರಿಂದ ಅಪಮಾನ ಆಗಿರುವುದಿಲ್ಲವೆಂದು ತಿಳಿದು ಬಂದ ಕಾರಣ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ.

ಆ) ಹೌದು

ಇ) ಈ ಶಾಲೆಯ ಸಂಬಂಧ ದೂರು ಬಂದ ಹಿನ್ನೆಲೆಯಲ್ಲಿ ಉಪ ನಿರ್ದೇಶಕರು, ಬೆಳಗಾಂ ಇವರು ದಿನಾಂಕ 10–03–2005 ರಂದು ಬಿ.ಆರ್. ಸಂಸ್ಥೆಯ ಹಿರಿಯ ಪ್ರಾಥಮಿಕ ಶಾಲೆಯ ನೊಂದಣಿಯನ್ನು ಹಿಂದಕ್ಕೆ ಪಡೆಯಲು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಳಗಾವಿ ಗ್ರಾಮೀಣ ಇವರಿಗೆ ತಿಳಿಸಲಾಗಿದ್ದು, ಅದರಂತೆ ದಿನಾಂಕ 4–4–2005 ರಿಂದ ತಕ್ಷಣ ಜಾರಿಗೆ ಬರುವಂತೆ ಸದರಿ ಶಾಲೆಯ ನೊಂದಣಿಯನ್ನು ರದ್ದುಪಡಿಸಿರುತ್ತಾರೆ.

ಈ) ಉಪ ನಿರ್ದೇಶಕರು, ಬೆಳಗಾಂ ಇವರ ಸೂಚನೆಯ ಮೇರೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಳಗಾವಿ ತಾ. ಇವರು ದಿನಾಂಕ 4–4–2005 ರಿಂದ ತಕ್ಷಣ ಜಾರಿಗೆ ಬರುವಂತೆ ನೊಂದಣಿಯನ್ನು ರದ್ದುಪಡಿಸಿದ್ದು, ಇದಕ್ಕೆ ವಿರುದ್ಧವಾಗಿ ಬಿ.ಆರ್. ಆಡಳಿತ ಮಂಡಳಿಯವರು ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಸದರಿ ದಾವೆಯ ತೀರ್ಪು ದಿನಾಂಕ 2–1–2006 ರಲ್ಲಿ ದಿನಾಂಕ 4–4–2005 ರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಆದೇಶವನ್ನು ರದ್ದುಗೊಳಿಸಿ, ನಿಯಮಾನುಸಾರ ಪ್ರಕರಣವನ್ನು ಇತ್ಯರ್ಥಪಡಿಸಲು ಆದೇಶಿಸಿದ್ದು, ಅದರಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಉಪ ನಿರ್ದೇಶಕರ ಸೂಚನೆಯ ಮೇರೆಗೆ ನ್ಯಾಯಾಲಯದ ತೀರ್ಪಿನಂತೆ ಕ್ರಮ ಕೈಗೊಂಡಿರುವುದರಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಅವಕಾಶವಿರುವುದಿಲ್ಲ.

ಉ) 168 ಶಾಲೆಗಳು (ಪಟ್ಟಿ ಲಗತ್ತಿಸಿದೆ)

ಊ) ರಾಜ್ಯದಲ್ಲಿ ಕೆಲವು ಶಾಲೆಗಳನ್ನು ಕೈಬಿಟ್ಟಿರುವ ಬಗ್ಗೆ ದೂರು ಬಂದಿರುವ ಹಿನ್ನೆಲೆಯಲ್ಲಿ ಪರಿಶೀಲನೆ ಮಾಡಿ ವರದಿ ಸಲ್ಲಿಸುವಂತೆ ವಿಭಾಗ ಮಟ್ಟದ ಅಧಿಕಾರಿಗಳಿಗೆ ಆದೇಶ ನೀಡಲಾಗಿದೆ.

2038 (2517) ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಪಟ್ಟಿ ಒದಗಿಸುವುದು);

ಆ) ರಾಜ್ಯದ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳನ್ನೊಳಗೊಂಡ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಪಟ್ಟಿ ಒದಗಿಸುವುದು);

ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತ್ಯಂತ ಅವಶ್ಯಕವಿರುವ ಕಡೆಗಳಲ್ಲಿ ವಿಜ್ಞಾನ ವಿಭಾಗಗಳನ್ನು ತೆರೆಯುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ಬಿಜಾಪುರ ಜಿಲ್ಲೆಯ ಮಮದಾಪೂರ, ಮುಳವಾಡ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗ ಆರಂಭಿಸಲಾಗುವುದೇ;

ಉ) ಹಾಗಿದ್ದರೆ, ಯಾವ ವರ್ಷದಲ್ಲಿ ವಿಜ್ಞಾನ ವಿಭಾಗಗಳನ್ನು ಆರಂಭಿಸಲಾಗುವುದು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ರಾಜ್ಯದಲ್ಲಿ ಒಟ್ಟು 907 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ. (ಜಿಲ್ಲಾವಾರು ಅಂಕಿ ಅಂಶಗಳ ವಿವರಗಳನ್ನು ಒದಗಿಸಲಾಗಿದೆ)

ಆ) ವಿಜ್ಞಾನ ವಿಭಾಗಗಳನ್ನೊಂಡ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ 240 (ಜಿಲ್ಲಾವಾರು ಅಂಕಿ ಅಂಶಗಳ ವಿವರಗಳನ್ನು ಒದಗಿಸಲಾಗಿದೆ).

ಇ) ಒಟ್ಟಾರೆ ವಿದ್ಯಾರ್ಥಿಗಳ ಸಂಖ್ಯಾಬಲ 200 ಕ್ಕಿಂತ ಹೆಚ್ಚಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳನ್ನು ತೆರೆಯುವ ಪ್ರಸ್ತಾವನೆಯು ಸರ್ಕಾರದ ಮುಂದಿದೆ.

ಈ, ಉ) ಈ ಸ್ಥಳಗಳಲ್ಲಿ ವಿಜ್ಞಾನ ವಿಭಾಗ ಪ್ರಾರಂಭಿಸಲು ಇದುವರೆವಿಗೆ ಯಾವುದೇ ಕೋರಿಕೆ ಬಂದಿರುವುದಿಲ್ಲ. ಅಂತಹ ಕೋರಿಕೆ ಬಂದಲ್ಲಿ ಶೈಕ್ಷಣಿಕ ಅಗತ್ಯತೆ, ವಿದ್ಯಾರ್ಥಿಗಳ ಸಂಖ್ಯಾಬಲ, ಮೂಲಭೂತ ಸೌಲಭ್ಯದ ಅಭ್ಯತೆ ಬಗ್ಗೆ ವರದಿ ಪಡೆದು ಆಯವ್ಯಯದಲ್ಲಿನ ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಹಂತ ಹಂತವಾಗಿ ಮಂಜೂರು ಮಾಡಲುಕ್ರಮ ತೆಗೆದುಕೊಳ್ಳಲಾಗುವುದು.